# 2 ನೇ ಹೆಚ್ಚುವರಿ ಪ್ರಥಮ ದರ್ಜೆಯ  ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು

**ಸಿ.ಸಿ 1445/2017                ಸಿ. ಡಬ್ಲುಃ 01**

**ಪಿ. ಡಬ್ಲುಃ 01**

| | |
|---|---|
| ಸಾಕ್ಷಿದಾರರ ಹೆಸರು ತಂದೆ/ ಗಂಡನ ಹೆಸರು | ರವಿ. ಪಿ<br>ಪುಟ್ಟಸ್ವಾಮಿ |
| ವಯಸ್ಸು | 37 ವರ್ಷ |
| ಕೆಲಸ | ಚಾಲಕ |
| ವಾಸ | ಬಸವರಾಜಪುರ . |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 07-04-2026** |

**ಮುಖ್ಯ ವಿಚಾರಣೆಃ  ಶ್ರೀ. ಎಪಿಪಿ  ವಕೀಲರಿಂದಃ**

ಮೃತ ಪುಟ್ಟಸ್ವಾಮಿ ನನ್ನ ತಂದೆ . ಚಾಸಾ-1 ರಿಂದ 6  ನನಗೆ ಪರಿಚಯ ಇರುತ್ತದೆ..  ನ್ಯಾಯಾಲಯದ ಮುಂದೆ ಇರುವ ಆರೋಪಿ ದೂರು  ಆಗಿದ್ದು ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು  ನಿಪಿ-1 ಎಂದು, ಅದರ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ನಿಪಿ-1 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನಿಪಿ-1 ಕ್ಕೆ ಪೊಲೀಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ.

ಆರೋಪಿ ಯಾವ ರೀತಿ ವಾಹನವನ್ನು ಚಾಲನೆ ಮಾಡಿಕೊಂಡು ಬಂದು ಚಾಲನೆ ಮಾಡಿಕೊಂಡು ಬಂದು ನನ್ನ ತಂದೆ  ಡಿಕ್ಕಿ ಪಡಿಸಿದ ಎಂದು ನನಗೆ ಗೊತ್ತಿಲ್ಲ ಸದರಿ ಅಪಘಾತ ಯಾರ ತಪ್ಪಿನಿಂದ ಆಯಿತು  ಎಂಬುದು ನನಗೆ ಗೊತ್ತಿಲ್ಲ ,

ನಾನು ಅಪಘಾತವನ್ನು ಕಣ್ಣಾರೆ ನೋಡಿರುವುದಿಲ್ಲ. ಆರೋಪಿ ವಿರುದ್ಧ ಯಾವುದೇ ದೂರನ್ನು ನೀಡಿರುವುದಿಲ್ಲ.

ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಯಾವುದೇ ಮರು ಹೇಳಿಕೆ ಪಡೆದುಕೊಂಡಿರುವುದಿಲ್ಲ ಈ ಪ್ರಕರಣದ ವಿದ್ಯಮಾನ ಗೊತ್ತಿಲ್ಲ.

(ಸಸಅ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಲು ಅನುಮತಿಯನ್ನು ಕೋರಿದ್ದು ಅನುಮತಿಯನ್ನು ನೀಡಲಾಯಿತು)

**ಪಾಟೀ ಸವಾಲುಃ ಶ್ರೀ. ಎಪಿಪಿ ಯವರಿಂದ**

ದಿಃ 27-04-2017 ರ ಮಧ್ಯಾಹ್ನ 3 ಗಂಟೆ ಸಮಯದಲ್ಲಿ ಬಸವರಾಜು ಪುರದಿಂದ ದೊಡ್ಡ ಕವಲಂದೆ ಗ್ರಾಮಕ್ಕೆ ಮನೆ ಸಾಮಾನು ತರಲು ಹೋಗುತ್ತಿದ್ದರು ಎಂದರೆ ಸರಿಯಲ್ಲ. ಹೊಸೂರು ಸರ್ಕಲ್ ಹತ್ತಿರ ನಂಜನಗೂಡು ಚಾಮರಾಜನಗರ ಮುಖ್ಯ ರಸ್ತೆ ಎಡಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ಆರೋಪಿ ಶಿವಕುಮಾರ್ ದ್ವಿಚಕ್ರ ವಾಹನ ಸಂಖ್ಯೆ ಕೆಎ-09- ಹೆಚ್ ಜಿ -5415 ಟಲ್ಲಿ ಅತಿವೇಗ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹಿಂದೆಯಿಂದ ಬಂದು ಡಿಕ್ಕಿ ಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ ನಮ್ಮ ತಂದೆಯವರಿಗೆ ತಲೆಗೆ ತೀವ್ರ ಪೆಟ್ಟು ಬಿದ್ದು ರಕ್ತ ಸ್ರಾವ ಉಂಟಾಗಿ ಪ್ರಜ್ಞಾ ಹೀನರಾಗಿರುತ್ತಾರೆ ಎಂದರೆ ಸರಿಯಲ್ಲ. ತಕ್ಷಣ ಹತ್ತಿರದಲ್ಲಿ ಇದ್ದ ಚಾಸಾ-2 ಮತ್ತು 3 ರವರು ಸ್ಥಳೀಯ ವೈದರು ಲಭ್ಯವಿಲ್ಲದಿದ್ದ ಕಾರಣ ನಂಜನಗೂಡಿನ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ತಂದೆಯವರು ಪರೀಕ್ಷಿಸಿದ ವೈದರು ಕೂಡಲೇ ಹೆಚ್ಚಿನ ಚಿಕಿತ್ಸೆಗೆ ಮೈಸೂರಿನ ಕೆ ಆರ್ ಆಸ್ಪತ್ರೆಗೆ ಕರೆದುಕೊಂಡು ಹೋಗುವಂತೆ ತಿಳಿಸಿದರು ಎಂದರೆ ಸರಿಯಲ್ಲ. ವಿಷಯವನ್ನು ತಿಳಿಸಿದ ಬಳಿಕ ನಾನು ಕೂಡಲೇ ಕೆ ಆರ್ ಆಸ್ಪತ್ರೆಯಿಂದ ವೈದ್ಯರ ಸಲಹೆಗೆ ಮೇರೆಗ ಜೆ ಎಸ್ ಎಸ್ ಆಸ್ಪತ್ರೆಗೆ ಕರೆದುಕೊಂಡು ಬಂದು ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ. ಅಪಘಾತ ಪಡಿಸಿದ ಆರೋಪಿ ಶಿವಕುಮಾರ್

ರವರು ಆಸ್ಪತ್ರೆಗೆ ಬಂದು ಚಿಕಿತ್ಸೆಯ ವೆಚ್ಚ ಭರಿಸಲು ಒಪ್ಪಿಕೊಂಡಿರುತ್ತಾರೆ ಮತ್ತು ಯಾವುದೇ ವೆಚ್ಚವನ್ನು ಭರಿಸಿರುವುದಿಲ್ಲ ಎಂದರೆ ಸರಿಯಲ್ಲ. ನಮ್ಮ ತಂದೆಯವರ ಆರೋಗ್ಯ ಚಿಂತಾಜನಕವಾಗಿದ್ದು ಕೋಮ ಸ್ಥಿತಿಯಲ್ಲಿ ಇದ್ದು ಅವರನ್ನು ತೀವ್ರಾ ನಿಘಾ ಘಟಕದಲ್ಲಿ ಇರಿಸುವ ಕಾರಣ ತಡವಾಗಿ ದುರಾರು ನೀಡಲು ವಿಳಂಬ ಆಗಿರುತ್ತದೆ ಎಂದರೆ ಸರಿಯಲ್ಲ.

ಅಪಘಾತದ ಸಂಬಂಧ ನಾನು ನಿಪಿ-1 ರಂತೆ ಆರೋಪಿ ವಿರುದ್ಧ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿಃ 14-05-2017 ರಂದು ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಮರು ಹೇಳಿಕೆ ಪಡೆದುಕೊಂಡರು ಎಂದರೆ ಸರಿಯಲ್ಲ. ನಾನು ನನ್ನ ಮರು ಹೇಳಿಕೆಯಲ್ಲಿ ಓದಿ ಹೇಳಲಾದಂತೆ ಪೋಲೀಸರು ಮುಂದೆ ಮರು ಹೇಳಿಕೆ ಪಡೆದುಕೊಂಡರು ಎಂದರೆ ಸರಿಯಲ್ಲ. ಅಪಘಾತ ಮಾಡಿದ ಮೋಟಾರು ಸೈಕಲ್ ಕೆಎ -09- ಹೆಚ್‌ಜಿ-5415 ತಿಳಿಸಿದ್ದು ಅದು ಯಾವ ಕಂಪನಿಯ ವಾಹನ ಎಂದು ತಿಳಿಸಿರುವುದಿಲ್ಲ. ಅಪಘಾತ ಮಾಡಿದ ವಾಹನ ಯಮಹಾ ಕಂಪನಿಯ ಮೋಟಾರು ಸೈಕಲ್ ಆಗಿರುತ್ತದೆ ಎಂದರೆ ಸರಿಯಲ್ಲ. ದಿಃ 12-05-2017 ರಂದು ನಮ್ಮ ತಂದೆಯವರು ಬೆಳಗಿನ ಜಾವ 1-45 ಗಂಟೆ ಸಮಯದಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಜೆ ಎಸ್ ಎಸ್ ಆಸ್ಪತ್ರೆಯಲ್ಲಿ ಮೃತ ಪಟ್ಟಿರುತ್ತಾರೆ ಎಂದು ಮರು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಸಾಕ್ಷಿಗೆ ಹೇಳಿಕೆ ಭಾಗವನ್ನು ಓದಿ ಹೇಳಲಾಗಿ ಸಾಕ್ಷಿ ಸದರಿ ಹೇಳಿಕೆ ಭಾಗವನ್ನು ಅಲ್ಲಗಳೆದಿದ್ದರಿಂದ ಕೆಂಪು ಶಾಯಿಯಿಂದ ಗುರುತಿಸಲಾದ ಭಾಗವನ್ನು ನಿಪಿ-2 ಎಂದು ಗುರುತಿಸಲಾಯಿತು.

ನಿಪಿ-1 ರಂತೆ ಆರೋಪಿ ವಿರುದ್ಧ ದೂರು ನೀಡಿದ್ದರು ಸಹ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-1 ರಿಂದ 2 ರಲ್ಲಿ ಬರೆದಿರುವ ವಿಚಾರ ಗೊತ್ತಿದ್ದರು ಸಹ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಆರೋಪಿತರ ಪರ ಶ್ರೀ  ವಕೀಲರಿಂದಃ ಇಲ್ಲ</u>**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**